**ಕರ್ನಾಟಕ ವಿಧಾನಪರಿಷತ್ತು**

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 215
ಸದಸ್ಯರ ಹೆಸರು : ಶ್ರೀ ಹೆಚ್.ಎಸ್.ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 14/02/2023
ಉತ್ತರಿಸುವವರು : ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು.

| ಕ್ರ.ಸ | ಪ್ರಶ್ನೆ | ಉತ್ತರ |
|---|---|---|
| ಅ. | ಬೆಂಗಳೂರು ಜಿಲ್ಲೆಯ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಒಳಚರಂಡಿಗಳಿಲ್ಲದೆ ಸಾರ್ವಜನಿಕರಿಗೆ ತೊಂದರೆಯುಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ.<br>ಮಾನ್ಯ ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ 09 ಎಂಎಲ್‌ಆರ್ 2020, ದಿನಾಂಕ:24.02.2021ರಲ್ಲಿ ಬಾಶೆಟ್ಟಿ ಹಳ್ಳಿ ಗ್ರಾಮಪಂಚಾಯಿತಿಯನ್ನು ಬಾಶೆಟ್ಟಿಹಳ್ಳಿ ಪಟ್ಟಣ ಪಂಚಾಯಿತಿಯನ್ನಾಗಿ ಹೊಸದಾಗಿ ಮೇಲ್ದರ್ಜೆಗೇರಿಸಲಾಗಿದ್ದು, ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಒಳಚರಂಡಿ ವ್ಯವಸ್ಥೆ ಇರುವುದಿಲ್ಲ. |
| ಆ. | ಬಂದಿದ್ದಲ್ಲಿ, ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಒಳಚರಂಡಿ ನಿರ್ಮಿಸಲು ಸರ್ಕಾರದಿಂದ ಯಾವ ಕ್ರಮ ತೆಗೆದುಕೊಳ್ಳಲಾಗಿದೆ; | ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಒಳಚರಂಡಿ ವ್ಯವಸ್ಥೆ ಕಲ್ಪಿಸಲು ಸೂಕ್ತ ಜಾಗದ ಅವಶ್ಯಕತೆ ಇದ್ದು ಜಾಗ ಗುರುತಿಸಲು ಪಟ್ಟಣ ಪಂಚಾಯಿತಿ KUWS&DB ಮತ್ತು KSPCB ನ ತಂಡವು ಜಂಟಿಯಾಗಿ ಪರಿಶೀಲಿಸಿರುತ್ತದೆ. ಸೂಕ್ತ ಜಾಗ ಗುರುತಿಸಿಕೊಡಲು ಜಿಲ್ಲಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರು ದಿನಾಂಕ:25.01.2023ರಂದು ತಹಶೀಲ್ದಾರ್, ದೊಡ್ಡಬಳ್ಳಾಪುರ ತಾಲ್ಲೂಕು ರವರಿಗೆ ಪತ್ರ ಬರೆದಿರುತ್ತಾರೆ. |
| ಇ. | ಕಳೆದ 3 ವರ್ಷಗಳಲ್ಲಿ ನಡೆದ ಕಾಮಗಾರಿಗಳ ವಿವರ ಹಾಗೂ ವೆಚ್ಚದ ವಿವರ ನೀಡುವುದು; | ಯಾವುದೇ ಕಾಮಗಾರಿ ನಡೆದಿರುವುದಿಲ್ಲ. |
| ಈ. | ಯಾವ ಕಾಲ ಮಿತಿಯೊಳಗೆ ಯೋಜನೆಯನ್ನು ಅನುಷ್ಠಾನಗೊಳಿಸಲಾಗುವುದು? | ಜಿಲ್ಲಾಡಳಿತದಿಂದ ಸದರಿ ಪ್ರಸ್ತಾವನೆ ಸ್ವೀಕೃತಗೊಂಡ ನಂತರ ಅನುದಾನದ ಲಭ್ಯತೆಗೆ ಅನುಗುಣವಾಗಿ ನಿಯಮಾನುಸಾರ ಕ್ರಮವಹಿಸಲಾಗುವುದು. |

ಸಂಖ್ಯೆ: ನಅಇ 21 ಜಿಇಎಲ್ 2023(ಇ)

ಎನ್. ನಾಗರಾಜು (ಎಂ.ಟಿ.ಬಿ)
ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ
ಸಾರ್ವಜನಿಕ ವಲಯ ಉದ್ಯಮಗಳ ಸಚಿವರು.